# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1193

ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ )

ಉತ್ತರಿಸಬೇಕಾದ ದಿನಾಂಕ : 20-12-2018

ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ 3 ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ ಯಾವ ಯಾವ ಸಂಘ-ಸಂಸ್ಥೆಗಳಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ? (ಅನುದಾನ ಮಂಜೂರು ಮಾಡಲು ಶಿಫಾರಸ್ಸು ಮಾಡಿರುವವರ ಮಾಹಿತಿ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಾಮಾನ್ಯ ಧನಸಹಾಯ ಯೋಜನೆಯಡಿ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿರುವ ಸಂಸ್ಥೆಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.<br>ಕಳೆದ 3 ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿರುವ ಸಂಸ್ಥೆಗಳ ವಿವರವನ್ನು ಅನುಬಂಧ – 1 ರಲ್ಲಿ ನೀಡಲಾಗಿದೆ. |
| ಆ | ಇಲಾಖೆ ವತಿಯಿಂದ ಸಂಘ-ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಲು ಇರುವ ನಿಯಮಗಳೇನು? | ಸರ್ಕಾರದ ಆದೇಶ ಸಂಖ್ಯೆ: ಕಸಂವಾ 253 ಕಸಧ 2017 ದಿನಾಂಕ:03.07.2017ರಲ್ಲಿ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಲು ಇರುವ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. (ಪ್ರತಿಯನ್ನು ಅನುಬಂಧ – 2 ರಲ್ಲಿ ನೀಡಲಾಗಿದೆ) |
| ಇ | ಸದರಿ ನಿಯಮಾಳಿಗಳನ್ನು ಪಾಲಿಸದಿರುವ ಸಂಘ-ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ? ಹಾಗಿದ್ದಲ್ಲಿ ನಿಯಮಾವಳಿಗಳನ್ನು ಪಾಲಿಸದೆ ಅನುದಾನ ಪಡೆದಿರುವ ಸಂಘ-ಸಂಸ್ಥೆಗಳು ಯಾವುವು? ಪಡೆದಿರುವ ಅನುದಾನ ಎಷ್ಟು? (ಕಳೆದ 3 ವರ್ಷಗಳ ಸಂಪೂರ್ಣ ವಿವರ ನೀಡುವುದು) | ಸರ್ಕಾರದ ನಿಯಮಾವಳಿಗಳನ್ನು ಪಾಲಿಸದೆ ಇರುವ ಯಾವುದೇ ಸಂಘ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿರುವುದಿಲ್ಲ. |
| ಈ | ಈ ಪ್ರಕರಣದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? ನಿಯಮಾವಳಿಗಳನ್ನು ಪಾಲಿಸದಿರುವ ಸಂಘ-ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿದ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು? | ಉದ್ಭವಿಸುವುದಿಲ್ಲ. |

ಸಂಖ್ಯೆ: ಕಸಂವಾ 66 ಕವಿಸ 2018

(ಡಾ. ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.